ಇ) ಉಳಿದ ಪ್ರದೇಶದಲ್ಲಿ ಯಾವಾಗ ಕಿಂಡಿ ಅಣೆಕಟ್ಟು ನಿರ್ಮಿಸಿಕೊಡಲಾಗುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) 8 ಪ್ರದೇಶಗಳನ್ನು ಗುರುತಿಸಲಾಗಿದೆ.

ಆ) ಹೊಸಾಳ ಗ್ರಾಮದ ನಾಗರಮಠ ಎಂಬಲ್ಲಿ ಉಪ್ಪು ನೀರು ತಡೆ ಅಣೆಕಟ್ಟು ಕಾಮಗಾರಿಯನ್ನು ಸಧ್ಯದಲ್ಲೆ ಕೈಗೊಳ್ಳಲಾಗುವುದು.

ಇ) ಉಳಿದ ಪ್ರದೇಶದಲ್ಲಿ ಕಾಮಗಾರಿಗಳನ್ನು ಕೈಗೊಳ್ಳುವ ಯೋಜನೆಗಳಿಲ್ಲ.

....

122 (87): ಶ್ರೀ ಜೀವರಾಜ್ ಡಿ.ಎನ್. (ಶೃಂಗೇರಿ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶೃಂಗೇರಿ ಕೊಪ್ಪ ಹಾಗೂ ಎಸ್.ಆರ್. ಪುರ ತಾಲ್ಲೂಕಿನಲ್ಲಿ ವಿದ್ಯುದೀಕರಣಗೊಳಿಸದೇ ಇರುವ ಮಜಿರೆಗಳ ಸಂಖ್ಯೆ ಎಷ್ಟು;

ಆ) ಪ್ರಸ್ತುತ ಸಾಲಿನಲ್ಲಿ ಇವುಗಳ ವಿದ್ಯುದೀಕರಣಕ್ಕೆ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಶೃಂಗೇರಿ, ಕೊಪ್ಪ ಹಾಗೂ ಎಸ್.ಆರ್.ಪುರ ತಾಲ್ಲೂಕುಗಳ ಒಟ್ಟು 312 ಮಜಿರೆಗಳು (ಉಪಗ್ರಾಮಗಳು) ಇನ್ನೂ ವಿದ್ಯುದೀಕರಣಗೊಳ್ಳಬೇಕಾಗಿರುತ್ತದೆ.

ಆ) ಶೃಂಗೇರಿ ಕೊಪ್ಪ ಹಾಗೂ ಎಸ್.ಆರ್. ಪುರ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಒಟ್ಟು 53 ಮಜಿರೆಗಳನ್ನು ಟರ್ನ್ ಕೀ ಆಧಾರದಲ್ಲಿ ವಿದ್ಯುದೀಕರಿಸಲು 2002ನೇ ವರ್ಷದಲ್ಲಿ ಗುತ್ತಿಗೆದಾರರಿಗೆ ವಹಿಸಿ ಕೊಡಲಾಗಿತ್ತು. ಆದರೆ, ಈವರೆಗೆ ಕೇವಲ 4 ಮಜಿರೆಗಳನ್ನು ಮಾತ್ರ ವಿದ್ಯುದೀಕರಣಗೊಳಿಸಲು ಗುತ್ತಿಗೆದಾರರಿಂದ ಸಾಧ್ಯವಾಗಿರುತ್ತದೆ. ಗುತ್ತಿಗೆದಾರರ ಕಾರ್ಯ ನಿರ್ವಹಣೆ ಸಾಮರ್ಥ್ಯವು ತೃಪ್ತಿಕರವಾಗಿಲ್ಲದ ಕಾರಣ ಗುತ್ತಿಗೆಯನ್ನು ರದ್ದುಗೊಳಿಸಲು ಕಾನೂನು ಬದ್ದ ಕ್ರಮ ಕೈಗೊಳ್ಳಲಾಗುತ್ತಿದೆ. ಸದರಿ ಗುತ್ತಿಗೆದಾರರ ಗುತ್ತಿಗೆಯನ್ನು ರದ್ದು ಪಡಿಸಿದ ನಂತರ, ಹೊಸದಾಗಿ ಟೆಂಡರ್‌ಗಳನ್ನು ಕರೆದು ಆದಷ್ಟು ಜಾಗ್ರತೆ ವಿದ್ಯುದೀಕರಣ ಕಾರ್ಯಗಳನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು. ಬಾಕಿ ಉಳಿದ ಮಜಿರೆಗಳ ವಿದ್ಯುದೀಕರಣ ಕಾರ್ಯಗಳನ್ನು ಆರ್ಥಿಕ ಲಭ್ಯತೆಗೆ ಅನುಗುಣವಾಗಿ ಕೈಗೆತ್ತಿಕೊಳ್ಳಲಾಗುವುದು.

....

123 (88): ಶ್ರೀ ಜೀವರಾಜ್ ಡಿ.ಎನ್. (ಶೃಂಗೇರಿ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮೆಸ್ಕಾಂ ವ್ಯಾಪ್ತಿಗೆ ಬರುವ ಶೃಂಗೇರಿ ಕೊಪ್ಪ ಮತ್ತು ಎನ್.ಆರ್.ಪುರ ತಾಲ್ಲೂಕುಗಳಲ್ಲಿರುವ ಇಂಜಿನಿಯರ್ ಮತ್ತು ಲೈನ್‌ಮನ್ ಹುದ್ದೆಗಳ ಸಂಖ್ಯೆ ಎಷ್ಟು; ಹಾಗೂ ಹಾಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

ಆ) ಲೈನ್‌ಮನ್ ಹುದ್ದೆ ಖಾಲಿ ಇರುವುದರಿಂದ ಈ ಭಾಗದ ಗ್ರಾಮೀಣ ಪ್ರದೇಶದ ಜನರಿಗೆ ಅಸಮರ್ಪಕ ವಿದ್ಯುತ್ ಸರಬರಾಜು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;